## ಪ್ರಧಾನ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಧೀಶರ ನ್ಯಾಯಾಲಯ, ಯಾದಗಿರಿ.

**ಸಿ.ಸಿ ನಂಃ 101/ 2015**

| | | |
|---|---|---|
| ಸಾಕ್ಷಿಯ ಹೆಸರುಃ | ಶ್ರೀಮತಿ ಭೀಮನಿಬಾಯಿ | ಫ್ರಾಸಾಃ **45** |
| ತಂದೆಯ/ಗಂಡನ ಹೆಸರುಃ | ತುಕ್ಯಾನಾಯಕ | ಚಾಸಾಃ **60** |
| ವಯಸ್ಸುಃ | **70** ವರ್ಷ | ದಿಃ **27-07-2026** |
| ಉದ್ಯೋಗಃ | ಮನೆಕೆಲಸ | ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ ಸ್ಥಳಃ | ಬೊರಬಂಡ ಗ್ರಾಮ | |

ಸಾಕ್ಷಿಗೆ ಲಂಬಾಣಿ ಭಾಷೆ ಬರುತ್ತದೆ ಕನ್ನಡ ಭಾಷೆ ಬರುವುದಿಲ್ಲ ಎಂದು ಹೇಳಿದ ಮೇರೆಗೆ ಶ್ರೀ ವಿ ಬಿ ಆರ್ ವಕೀಲರನ್ನು ಭಾಷಾಂತರಕಾರರನ್ನಾಗಿ ನೇಮಿಸಲಾಯಿತು ಹಾಗೂ ಅವರಿಗೆ ಪ್ರಮಾಣ ವಚನ ಭೊದಿಸಲಾಯಿತು.

<u>ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ</u>

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಪೋಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

( ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿದಾರರನ್ನು ಭಾಗಶಃ ಪ್ರತಿಕೂಲ ಸಾಕ್ಷಿದಾರರು ಎಂದು ಪರಿಗಣಿಸಿ ಪಾಟೀ ಸವಾಲು ಮಡಲು ಅನುಮತಿ ಕೋರಿದರು - ಅನುಮತಿ ನೀಡಲಾಯಿತು)

<u>ಪಾಟೀ ಸವಾಲು ಃ ಮಾನ್ಯ ಸ.ಸ.ಅ. ರವರಿಂದಃ</u>

ದಿನಾಂಕ 28-06-2014 ರಂದು ನಾನು ಹಾಗೂ ಗ್ರಾಮದ ಇತರರು ಆರೋಪಿಯ ಗೂಡ್ಸ ವಾಹನದಲ್ಲಿ ಬೆಟದಳ್ಳಿ ಗ್ರಾಮಕ್ಕೆ ಹೋಗಿದ್ದೆವು ಎಂದರೆ ಸರಿಯಲ್ಲ. ಸದರಿ ಗ್ರಾಮದಲ್ಲಿ ಅಂತ್ಯಸಂಸ್ಕಾರ ಮುಗಿಸಿಕೊಂಡು ಮರಳಿ ನಮ್ಮೂರಿಗೆ ಬರುತ್ತಿದ್ದಾಗ ಮ 12.15 ಗಂಟೆಗೆ ಚೆನ್ನಾಕಾರ ಗ್ರಾಮದ ಸಣ್ಣಮುಕ್ಕಪ್ಪ ಇವರ ಹೊಲದ ಹತ್ತಿರ ಇಳಿಜಾರು ಹಾಗೂ ತಿರುವಿನಲ್ಲಿ ಆರೋಪಿ ವಾಹನವನ್ನು ಅತೀವೇಗ ಹಾಗೂ ಅಲಕ್ಷ್ಯತನದಿಂದ ಚಾಲನೆ ಮಾಡಿ ರಸ್ತೆಯ ಬಲಬದಿಯಲ್ಲಿ ಪಲ್ಟಿ ಮಾಡಿದ್ದರು ಎಂದರೆ ನನಗೆ ಗೊತ್ತಿಲ್ಲ. ಅಪಘಾತದಲ್ಲಿ ನನ್ನ ಬಲಗೈ ರಟ್ಟೆಗೆ ಭಾರಿ ಪೆಟ್ಟು ಹಾಗೂ ಎಡಗೈ ಮಣಿಕಟ್ಟಿಗೆ ಒಳಪೆಟ್ಟು ಆಗಿತ್ತು ಎಂದರೆ ಸರಿಯಲ್ಲ.

ಸದರಿ ವಾಹನದಲ್ಲಿದ್ದ ಇತರ 67 ಜನರಿಗೂ ಮತ್ತು ಚಾಲಕನಾಗಿದ್ದ ಆರೋಪಿಗೂ ಸಹ ಗಾಯಗಳಾಗಿದ್ದವು ಎಂದರೆ ನನಗೆ ಗೊತ್ತಿಲ್ಲ. ನಂತರ ನಮ್ಮನ್ನು ಗುರುಮಿಠಕಲ್ ಸರಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದರು ಎಂದರೆ ಸರಿಯಲ್ಲ. ಸೋಮಲಾ ಪವಾರ ಎಂಬಾತ ಅಪಘಾತದ ಪರಿಣಾಮವಾಗಿ ಆಸ್ಪತ್ರೆಯಲ್ಲಿ ಮರಣ ಹೊಂದಿರುತ್ತಾನೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಅಪಘಾತ ಆರೋಪಿಯ ತಪ್ಪಿನಿಂದ ಆಗಿರುತ್ತದೆ ಎಂದರೆ ಸರಿಯಲ್ಲ. ನಾನು ಈ ಮೇಲಿನಂತರ ಪೋಲೀಸರಿಗೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಯನ್ನು ನಿಪಿ 112 ಎಂದು ಗುರುತಿಸಲಾಯಿತು. ಈ ಮೇಲಿನ ಎಲ್ಲಾ ವಿಷಯ ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರವಾಗಿ ಶ್ರೀ ಎಂ ಎಂ ಇ ವಕೀಲರಿಂದ ಃ

ಪಾಟೀ ಸವಾಲು ಇಲ್ಲಾ ಎಂದು ತಿಳಿಸಿರುತ್ತಾರೆ.

**ಮರುವಿಚಾರಣೆ ಃ ಇರುವುದಿಲ್ಲ.**

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

**ಓ. ಹೇ. ಕೇ. ಸರಿ ಇದೆ.**

ಪ್ರಧಾನ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರು
**ಯಾದಗಿರಿ.**